# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 220(188)

ಸದಸ್ಯರ ಹೆಸರು : ಶ್ರೀ ಕುಶಾಲಪ್ಪಎಂ. ಪಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

ಉತ್ತರಿಸಬೇಕಾದ ದಿನಾಂಕ : 10.12.2024

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ತೋಟಗಾರಿಕೆ ಇಲಾಖೆಯಲ್ಲಿ ಬರುವ ಪ್ರಸ್ತುತ ಯೋಜನೆಗಳಾವುವು; ಸದರಿ ಯೋಜನೆಗಳು ಯಾವ ಯಾವ ರೀತಿಯ ಫಲಾನುಭವಿಗಳಿಗೆ ತಲುಪುತ್ತಿವೆ; (ಸಂಪೂರ್ಣ ಮಾಹಿತಿ ನೀಡುವುದು) | 2024-25ನೇ ಸಾಲಿನಲ್ಲಿ ತೋಟಗಾರಿಕೆ ಇಲಾಖೆಯು ಅನುಷ್ಠಾನಗೊಳಿಸುತ್ತಿರುವ ಫಲಾನುಭವಿ ಆಧಾರಿತ ಯೋಜನೆಗಳು ಈ ಕೆಳಕಂಡಂತಿವೆ:<br>1. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ<br>2. ರಾಷ್ಟ್ರೀಯ ತೋಟಗಾರಿಕೆ ಮಿಷನ್<br>3. ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ – ತಾಳೆ ಎಣ್ಣೆ<br>4. ಪರಂಪರಾಗತ ಕೃಷಿ ವಿಕಾಸ ಯೋಜನೆ<br>5. ಉತ್ಪಾದನಾ ಸುಧಾರಣಾ ಕಾರ್ಯ ಯೋಜನೆಗೆ ತೆಂಗಿನಲ್ಲಿ ಸಂಯೋಜಿತ ಬೇಸಾಯ<br>6. ಕೃಷಿ ಯಾಂತ್ರೀಕರಣ ಉಪ ಅಭಿಯಾನ<br>7. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ<br>8. ಸಮಗ್ರ ತೋಟಗಾರಿಕಾ ಅಭಿವೃದ್ಧಿ<br>9. ತೋಟಗಾರಿಕೆ ಬೆಳೆಗಳ ಕೀಟ ಮತ್ತು ರೋಗಗಳ ಸಮಗ್ರ ನಿಯಂತ್ರಣ ಯೋಜನೆ<br>10. ತೋಟಗಾರಿಕೆ ಉದ್ಯಾನವನಗಳು ಮತ್ತು ತೋಟಗಳು<br>11. ಅನುಸೂಚಿತ ಜಾತಿಗಳ ಉಪ ಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ ಕಾಯ್ದೆ 2013 ರಡಿ ಬಳಕೆಯಾಗದೆ ಇರುವ ಮೊತ್ತ<br>12. ಇಲಾಖಾ ಪ್ರಯೋಗ ಶಾಲೆಗಳ ಅಭಿವೃದ್ಧಿ<br>13. ಕೃಷಿ ಕ್ಷೇತ್ರ ಮತ್ತು ಸಸ್ಯವಾಟಿಕೆಗಳ ಅಭಿವೃದ್ಧಿ ಮತ್ತು ನಿರ್ವಹಣೆ<br>14. ಮಧುವನ ಮತ್ತು ಜೇನು ಸಾಕಾಣೆ ಅಭಿವೃದ್ಧಿ<br>15. ಜೇನು ಸಾಕಾಣೆ ಅಭಿವೃದ್ಧಿ<br>16. ಪ್ರಚಾರ ಮತ್ತುಸಾಹಿತ್ಯ<br>17. ತೋಟಗಾರಿಕೆ ಕ್ಷೇತ್ರಗಳ ನಿರ್ವಹಣೆ (ಜಿಲ್ಲಾ ವಲಯ) |

| | | |
|---|---|---|
| | | ಈ ಯೋಜನೆಗಳ ಫಲಾನುಭವಿ ಮಾನದಂಡಗಳು ಈ ಕೆಳಗಿನಂತಿವೆ:-<br>1. ಫಲಾನುಭವಿಯು ರೈತರಾಗಿದ್ದು, ಜಮೀನು ಅವರ ಹೆಸರಿನಲ್ಲಿರಬೇಕು. ಜಂಟಿ ಖಾತೆಯಾಗಿದ್ದಲ್ಲಿ ಇತರೆ ಖಾತೆದಾರರ ಒಪ್ಪಿಗೆ ಪತ್ರ ಪಡೆದಿರಬೇಕು. ತಂದೆ ಅಥವಾ ತಾಯಿ ಹೆಸರಿನಲ್ಲಿ ಜಮೀನಿದ್ದು, ಅವರು ಮರಣ ಹೊಂದಿದ್ದಲ್ಲಿ ಮಾತ್ರ ಗ್ರಾಮ ಲೆಕ್ಕಾಧಿಕಾರಿಯಿಂದ ದೃಢೀಕರಿಸಿ, ಕುಟುಂಬದ ಇತರೆ ಸದಸ್ಯರಿಂದ ಒಪ್ಪಿಗೆ ಪಡೆಯುವುದು. FRUITS/HASIRU ತಂತ್ರಾಂಶದ ಮೂಲಕ ಅರ್ಜಿ ಪಡೆದು, ಅರ್ಹ ಅರ್ಜಿದಾರರ ಹೆಸರುಗಳನ್ನು ಜೇಷ್ಠತಾ ವಹಿಯಲ್ಲಿ ನಿರ್ವಹಿಸಿ ಜೇಷ್ಠತೆಯ ಆಧಾರದ ಮೇಲೆ ಸಹಾಯಧನಕ್ಕೆ ಪರಿಗಣಿಸಲಾಗುವುದು.<br>2. ಕಾರ್ಯಾದೇಶ (work order) ನೀಡಿದ ನಂತರ ನಿಗದಿತ ಕಾಲಮಿತಿಯೊಳಗೆ ಕೆಲಸವನ್ನು ಪೂರ್ಣಗೊಳಿಸಿದ್ದಲ್ಲಿ ಸಹಾಯಧನವನ್ನು ಒದಗಿಸಲಾಗುವುದು.<br>3. ರೈತ ಫಲಾನುಭವಿಯು ಪರಿಶಿಷ್ಟಜಾತಿ (SC) ಮತ್ತು ಪರಿಶಿಷ್ಟ ಪಂಗಡ (ST) ಕ್ಕೆ ಸೇರಿದವರಾದಲ್ಲಿ ನಿಗಧಿತ ದಾಖಲಾತಿಗಳೊಂದಿಗೆ ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸುವುದು ಕಡ್ಡಾಯವಾಗಿರುತ್ತದೆ<br>4. ಈ ಹಿಂದೆ ಇಲಾಖೆಯಿಂದ ಯಾವುದೇ ಸಹಾಯಧನ ಪಡೆಯದ ಹೊಸ ಫಲಾನುಭವಿಗಳಿಗೆ ಹಾಗೂ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಆದ್ಯತೆ ನೀಡಲಾಗುವುದು.<br>ಮೇಲ್ಕಂಡ ಮಾನದಂಡಗಳನ್ನು ಪೂರೈಸಿದ ರೈತರಿಗೆ ಸಹಾಯಧನ ಒದಗಿಸಲಾಗುವುದು. |
| ಆ) | ತೋಟಗಾರಿಕೆ ಇಲಾಖೆಯಿಂದ ಕೃಷಿ ಅರಣ್ಯ ಪ್ರೋತ್ಸಾಹ ಯೋಜನೆಯಡಿ ಶ್ರೀಗಂಧ ಕೃಷಿಗೆ ಯಾವ ಯಾವ ರೀತಿಯ ಸಹಾಯಧನವನ್ನು ನೀಡಲಾಗುತ್ತಿದೆ; ರೈತರು ಶ್ರೀಗಂಧ ಕೃಷಿಯನ್ನು ಮಾಡಲು ಇರುವ ಷರತ್ತು ಮತ್ತು ನಿಬಂಧನೆಗಳು ಯಾವುವು; | ತೋಟಗಾರಿಕೆ ಇಲಾಖೆಯಿಂದ ಕೃಷಿ ಅರಣ್ಯ ಪ್ರೋತ್ಸಾಹ ಯೋಜನೆಯಡಿ ಶ್ರೀಗಂಧ ಕೃಷಿಗೆ ಯಾವುದೇ ಸಹಾಯಧನ ನೀಡಲಾಗುತ್ತಿಲ್ಲ ಹಾಗೂ ರೈತರು ಶ್ರೀಗಂಧ ಕೃಷಿಯನ್ನು ಮಾಡಲು ಯಾವುದೇ ಷರತ್ತು ಮತ್ತು ನಿಬಂಧನೆಗಳು ಇರುವುದಿಲ್ಲ. |

| | | |
|---|---|---|
| [illegible]) | ಶ್ರೀಗಂಧ ಗಿಡಗಳಿಗೆ ಸರ್ಕಾರದಿಂದ ನಿಗದಿಪಡಿಸಿರುವ ಬೆಲೆ ಎಷ್ಟು ಮತ್ತು ಯಾವ ಯಾವ ಸ್ಥಳಗಳಲ್ಲಿ ಖರೀದಿಸಲು ಅವಕಾಶ ಕಲ್ಪಿಸಲಾಗಿದೆ; | ಶ್ರೀಗಂಧ ಗಿಡಗಳಿಗೆ ಅರಣ್ಯ ಇಲಾಖೆಯಿಂದ ಸಾರ್ವಜನಿಕ ವಿತರಣೆಗಾಗಿ ಸಸಿಗಳನ್ನು ಬೆಳೆಸುವ (ಆರ್‌ಎಸ್‌ಪಿಡಿ)ಕಾರ್ಯಕ್ರಮದಡಿ ರಿಯಾಯಿತಿ ದರದಲ್ಲಿ 8x12 ಗಾತ್ರದ ಪ್ರತಿ ಸಸಿಗೆ ರೂ.3.00 ರಂತೆ ನೀಡಲಾಗಿರುತ್ತದೆ. ಸದರಿ ಸಸಿಗಳನ್ನು ಅರಣ್ಯ ಇಲಾಖೆಯ ಎಲ್ಲಾ ಸಸ್ಯ ಕ್ಷೇತ್ರಗಳಿಂದಲೂ ಖರೀದಿಸಲು ಅವಕಾಶವಿರುತ್ತದೆ. |
| ಈ) | ಕೊಡಗು ಜಿಲ್ಲೆಯಲ್ಲಿ ಶ್ರೀಗಂಧ ಕೃಷಿಗೆ ನೀಡಿರುವ ಸಹಾಯಧನ ಎಷ್ಟು? (ತಾಲ್ಲೂಕುವಾರು ಮಾಹಿತಿಯನ್ನು ನೀಡುವುದು) | ಕೊಡಗು ಜಿಲ್ಲೆಯಲ್ಲಿ ಶ್ರೀಗಂಧ ಕೃಷಿಗೆ ಯಾವುದೇ ಸಹಾಯಧನ ನೀಡಿರುವುದಿಲ್ಲ. |

HORTI 486 HGM 2024

**(ಎಸ್. ಎಸ್. ಮಲ್ಲಿಕಾರ್ಜುನ್)**

ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಇಲಾಖೆ